## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ 2015-16ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಕೇಂದ್ರ ಸಹಾಯಧನವನ್ನು ಮರುಹೊಂದಾಣಿಕೆ ಮೂಲಕ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ

1. ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 52ಜೈಅಯೋ 2015(ಭಾಗ-1) 2015 ದಿನಾಂಕ 08.03.2016
2. ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 52(1) ಜೈಅಯೋ 2015(ಭಾಗ-1)2015 ದಿನಾಂಕ 08.03.2016
3. ಸರ್ಕಾರದ ಆದೇಶದ ಸಂಖ್ಯೆ: ಗ್ರಾಅಪ 52(3) ಜೈಅಯೋ 2015(ಭಾಗ-1)2015 ದಿನಾಂಕ 08.03.2016
4. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 5-40/2015-BG ದಿನಾಂಕ 20.11.2015

**ಪ್ರಸ್ತಾವನೆ :**

ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, **2015-16ನೇ** ಸಾಲಿನ ರಾಜ್ಯ ಆಯವ್ಯಯದಡಿ **ರೂ.1256.00** ಲಕ್ಷಗಳನ್ನು ಕೇಂದ್ರ ಹಾಗೂ ರಾಜ್ಯ ಪಾಲಾಗಿ ಜಿಲ್ಲಾ ವಲಯದಡಿ ಹಂಚಿಕೆ ಮಾಡಿದೆ.

ಮೇಲೆ (1)&(3)ರಲ್ಲಿ ಓದಲಾದಂತೆ ನವ ಮತ್ತು ನವೀಕರಿಸಬಹುದಾದ ಇಂಧನ ಮಂತ್ರಾಲಯ, ನವ ದೆಹಲಿ ರವರು **2015-16ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಅನುಷ್ಠಾನಕ್ಕಾಗಿ ಬಿಡುಗಡೆ ಮಾಡಿದ **ರೂ.863.50**ಲಕ್ಷಗಳ ಪೈಕಿ **ರೂ.460.63** ಲಕ್ಷ ಹಾಗೂ **ರೂ.46.54**ಲಕ್ಷಗಳನ್ನು ಮರು ಹೊಂದಾಣಿಕೆ ಮೂಲಕ ಸಂಬಂಧಿತ ಜಿಲ್ಲೆಗಳಿಗೆ ಬಿಡುಗಡೆ ಮಾಡಿದೆ.

ಕೇಂದ್ರ ಸರ್ಕಾರವು ಒಟ್ಟಾರೆ ಬಿಡುಗಡೆ ಮಾಡಿದ ಅನುದಾನದ ಪೈಕಿ ಬಾಕಿ ಉಳಿದ **ರೂ.356.28**ಲಕ್ಷಗಳನ್ನು ಮೇಲೆ (3)ರಲ್ಲಿ ಓದಲಾದಂತೆ ಪ್ರಸಕ್ತ ಸಾಲಿನ ಆಯವ್ಯಯದಡಿ ನಿಗದಿಪಡಿಸಿದ ಅನುದಾನದಲ್ಲಿ ವೆಚ್ಚವಾಗದೇ ಬಾಕಿ ಉಳಿದ ಬೆಂಗಳೂರು(ಗ್ರಾ), ಬೆಂಗಳೂರು(ನಗರ), ಬಳ್ಳಾರಿ, ಚಾಮರಾಜನಗರ, ಚಿತ್ರದುರ್ಗ, ಧಾರವಾಡ, ಹಾಸನ, ಹಾವೇರಿ, ಕೊಡಗು, ಮಂಡ್ಯ, ಮೈಸೂರು, ರಾಯಚೂರು, ಶಿವಮೊಗ್ಗ ಮತ್ತು ತುಮಕೂರು ಜಿಲ್ಲಾ ಪಂಚಾಯತ್‌ಗಳಿಂದ ಹಿಂಪಡೆದು ಬೆಳಗಾವಿ ಮತ್ತು ಉಡುಪಿ ಜಿಲ್ಲಾ ಪಂಚಾಯತ್‌ಗಳಿಗೆ ಮರುಹೊಂದಾಣಿಕೆ ಮೂಲಕ ಮರು ಹಂಚಿಕೆ ಮಾಡಿದೆ.

ಇದರಿಂದಾಗಿ ಕೇಂದ್ರ ಸಹಾಯಧನ **ರೂ.356.28**ಲಕ್ಷಗಳನ್ನು ಬೆಳಗಾವಿ ಮತ್ತು ಉಡುಪಿ ಜಿಲ್ಲಾ ಪಂಚಾಯತ್‌ಗಳಿಗೆ ನಿಗದಿಪಡಿಸಿದ ಭೌತಿಕ ಗುರಿ / ಬಿಡುಗಡೆಯಾದ ಅನುದಾನದ ಮಿತಿಗೊಳಪಟ್ಟು, ಲೆಕ್ಕ ಶೀರ್ಷಿಕೆ **2810-60-196-6-01(ಯೋಜನೆ)**ರಡಿ ಮರುಹೊಂದಾಣಿಕೆ ಮೂಲಕ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ/52/ಜೈಅಯೋ/2015(4)(ಭಾಗ-1) ಬೆಂಗಳೂರು, ದಿನಾಂಕ 15.03.2016**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **2015-16ನೇ** ಸಾಲಿಗೆ ಸಂಬಂಧಿಸಿದಂತೆ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಅನುಷ್ಠಾನಕ್ಕಾಗಿ ಸಾಮಾನ್ಯ ವರ್ಗದಡಿ ಬಿಡುಗಡೆ ಮಾಡಿದ ಒಟ್ಟಾರೆ ಕೇಂದ್ರ ಸಹಾಯಧನದ ಪೈಕಿ **ರೂ.356.25ಲಕ್ಷ (ಮೂನ್ನೂರ ಐವತ್ತಾರು ಲಕ್ಷದ ಇಪ್ಪತ್ತೈದು ಸಾವಿರ ರೂಪಾಯಿಗಳು ಮಾತ್ರ)**ಗಳನ್ನು ಈ ಕೆಳಕಂಡ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

| ಕ್ರ.ಸಂ | ಜಿಲ್ಲೆ | ಬಿಡುಗಡೆ ಮಾಡಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|
| 1 | ಬೆಳಗಾಂ | 299.79 |
| 2 | ಉಡುಪಿ | 56.49 |
| | ಒಟ್ಟು | **356.28** |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಕಾರ್ಯಕ್ರಮದ ಮಾರ್ಗಸೂಚಿಗಳನ್ವಯ ಉದ್ದೇಶಿತ ಯೋಜನೆಗಳಿಗಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡಬಾರದು, ವ್ಯಪಗತ ಮಾಡಬಾರದು ಹಾಗೂ **"ಗಾಂಧಿ ಸಾಕ್ಷಿ ಕಾಯಕ"** ತತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು ಎಂಬ ಷರತ್ತಿಗೊಳಪಟ್ಟು ಈ ಅನುದಾನ ಬಿಡುಗಡೆ ಮಾಡಿದೆ.

ಸದರಿ ಅನುದಾನವನ್ನು **ಲೆಕ್ಕ ಶೀರ್ಷಿಕೆ 2810-60-196-6-01(ಯೋಜನೆ)**ರಡಿ ವೆಚ್ಚ ಭರಿಸಿ, ಈ ಅನುದಾನ ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ವಿವರಗಳನ್ನು ಹಾಗೂ ನಿಗದಿತ ನಮೂನೆಗಳಲ್ಲಿ ಸಿ.ಎರವರಿಂದ ಆಡಿಟ್ ಮಾಡಿಸಿ ಹಣಬಳಕೆ ಪ್ರಮಾಣ ಪತ್ರವನ್ನು ನೀಡುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/221/ಬಿಆರ್ಎಸ್/2016 ದಿನಾಂಕ **15.03.2016 ರಲ್ಲಿ ಸಹಮತಿ** ಪಡೆದು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್. ಕೃಷ್ಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಾಗಲಕೋಟೆ, ಬೆಳಗಾವಿ, ಕಲಬುರುಗಿ, ರಾಮನಗರ, ಉಡುಪಿ ಯಾದಗಿರಿ ಬೆಂಗಳೂರು(ಗ್ರಾ), ಬೆಂಗಳೂರು(ನಗರ), ಬಳ್ಳಾರಿ, ಚಾಮರಾಜನಗರ, ಚಿತ್ರದುರ್ಗ, ಧಾರವಾಡ, ಹಾಸನ, ಹಾವೇರಿ, ಕೊಡಗು, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ಶಿವಮೊಗ್ಗ ಮತ್ತು ತುಮಕೂರು
3. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
4. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ, ಬೆಳಗಾವಿ, ಕಲಬುರುಗಿ, ರಾಮನಗರ, ಉಡುಪಿ ಯಾದಗಿರಿ ಬೆಂಗಳೂರು(ಗ್ರಾ), ಬೆಂಗಳೂರು(ನಗರ), ಬಳ್ಳಾರಿ, ಚಾಮರಾಜನಗರ, ಚಿತ್ರದುರ್ಗ, ಧಾರವಾಡ, ಹಾಸನ, ಹಾವೇರಿ, ಕೊಡಗು, ಕೊಪ್ಪಳ, ಮಂಡ್ಯ, ಮೈಸೂರು, ರಾಯಚೂರು, ಶಿವಮೊಗ್ಗ ಮತ್ತು ತುಮಕೂರು
5. ಖಜಾನೆಗಳ ನಿರ್ದೇಶಕರು, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಟವರ್, ಬೆಂಗಳೂರು.
6. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಾರ್ಯದರ್ಶಿಗಳು (ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.